## ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ ೧೫ ಯುಎನ್‌ಇ ೨೦೦೪

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿ:೨೨-೦೩-೨೦೦೪.

## ಸುತ್ತೋಲೆ

ಪದವಿ ಪರೀಕ್ಷೆ ಮತ್ತು ಸ್ನಾತಕೋತ್ತರ ಪರೀಕ್ಷೆ ಬರೆಯುವ ದೃಷ್ಟಿದೋಷವುಳ್ಳ ವಿದ್ಯಾರ್ಥಿಗಳು ತಮಗೆ ಇಚ್ಛೆಯುಳ್ಳ, ವಿದ್ಯಾರ್ಹತೆ ಮಿತಿಗೆ ಒಳಪಡದಂತಹ ಬರಹಗಾರರನ್ನು ಉಪಯೋಗಿಸಿಕೊಳ್ಳಲು ಅನುಮತಿ ನೀಡುವ ಬಗ್ಗೆ ಹೊರಡಿಸಲಾದ ಇಡಿ ೧೫ ಯುಎನ್‌ಇ ೨೦೦೪ ದಿ:೫-೩-೨೦೦೪ರ ಸುತ್ತೋಲೆಯ ಮುಂದುವರಿಕೆಯಾಗಿ ಈ ಕೆಳಕಂಡಂತೆ ನಿರ್ದೇಶನಗಳನ್ನು ನೀಡಲಾಗಿದೆ.

೧) ಅಂಗವಿಕಲರು ಮತ್ತು ದೃಷ್ಟಿದೋಷವುಳ್ಳ ವಿದ್ಯಾರ್ಥಿಗಳು ಬರಹಗಾರರ ಸಹಾಯಕ್ಕಾಗಿ ಮುಂಚಿತವಾಗಿ ತಾವು ಓದುತ್ತಿರುವ ಕಾಲೇಜಿನ ಪ್ರಾಂಶುಪಾಲರಿಗೆ ಅರ್ಜಿ ಸಲ್ಲಿಸಿ ಅನುಮತಿಯನ್ನು ಪಡೆದುಕೊಂಡಿರತಕ್ಕದ್ದು ಮತ್ತು ಈ ಕೋರಿಕೆಯ ಜೊತೆಗೆ ಅಂಗವಿಕಲತೆಯ ಬಗ್ಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ಲಗತ್ತಿಸತಕ್ಕದ್ದು.

೨) ಬರಹಗಾರರ ಸಹಾಯವನ್ನು ಪಡೆದುಕೊಳ್ಳಲು ಇಚ್ಛಿಸುವ ವಿದ್ಯಾರ್ಥಿಗಳು ಪರೀಕ್ಷಾ ವೇಳೆಗಿಂತ ಒಂದು ಗಂಟೆ ಮುಂಚಿತವಾಗಿ ಬರಹಗಾರರ ವಿವರಗಳನ್ನು ಕಾಲೇಜಿನ ಪ್ರಾಂಶುಪಾಲರಿಗೆ ತಿಳಿಸಿ ಪೂರ್ವಾನುಮತಿ ಪಡೆಯುವುದು.

೩) ಬರಹಗಾರರ ವಿದ್ಯಾರ್ಹತೆಯು ಅಂಗವಿಕಲ ಮತ್ತು ದೃಷ್ಟಿದೋಷವುಳ್ಳ ವಿದ್ಯಾರ್ಥಿಗಳಿಗಿಂತ ಕಡಿಮೆ ವಿದ್ಯಾರ್ಹತೆ ಇರಬೇಕೆಂಬುದಾಗಿ ಏನೂ ಇಲ್ಲ. ಬರಹಗಾರರ ವಿದ್ಯಾರ್ಹತೆಯು ಹೆಚ್ಚಾಗಿ ಇದ್ದರೂ ಸಹ, ಅದು ಅಂಗವಿಕಲ ಮತ್ತು ದೃಷ್ಟಿದೋಷವುಳ್ಳ ವಿದ್ಯಾರ್ಥಿಗಳು ತೆಗೆದುಕೊಳ್ಳುತ್ತಿರುವ ಪರೀಕ್ಷೆಯಲ್ಲಿನ ವಿಷಯಗಳು ಒಂದೇ ಆಗಿರಬಾರದು. ಉದಾಹರಣೆಗೆ ಒಬ್ಬ ಬಿ.ಎ ಅಥವಾ ಎಂ.ಎ ವಿದ್ಯಾರ್ಹತೆ ಹೊಂದಿರತಕ್ಕ ಬರಹಗಾರನು ಬಿ.ಎಸ್ಸಿ ಪರೀಕ್ಷೆ ತೆಗೆದುಕೊಳ್ಳುತ್ತಿರುವ ಅಂಗವಿಕಲ ಮತ್ತು ದೃಷ್ಟಿದೋಷವುಳ್ಳ ವಿದ್ಯಾರ್ಥಿಗೆ ಬರಹಗಾರನಾಗಬಹುದು.

೪) ಯಾವುದಾದರೂ ಒಂದು ಅಥವಾ ಹೆಚ್ಚಿನ ಅಂಗವಿಕಲತೆಯ ತೊಂದರೆಯಿಂದ ನರಳುತ್ತಿರುವ ಹಾಗೂ ದೃಷ್ಟಿ ಹಾಗೂ ಶ್ರವಣ ವೈಕಲ್ಯತೆ ಇರುವ ಅಭ್ಯರ್ಥಿಗಳಿಗೆ ಹೆಚ್ಚಿನ ಸಮಯಾವಕಾಶ ನೀಡುವುದು ಅಗತ್ಯವಾಗಿರುತ್ತದೆ.. ಮೂರು ಗಂಟೆಯ ಅವಧಿಯ ಪ್ರಶ್ನೆ ಪತ್ರಿಕೆಗೆ ಗಂಟೆಗೆ ೨೦ ನಿಮಿಷಗಳಂತೆ ಒಂದು ಗಂಟೆ ಹೆಚ್ಚಿನ ಸಮಯಾವಕಾಶ ನೀಡುವುದು. ಈ ಸೌಲಭ್ಯವನ್ನು ಬರಹಗಾರರ ಸೌಲಭ್ಯಗಳನ್ನು ಉಪಯೋಗಿಸಿಕೊಳ್ಳುವ ವಿದ್ಯಾರ್ಥಿಗಳಿಗೂ ಕೂಡಾ ಒದಗಿಸುವುದು.

೫) ಶ್ರವಣ ದೋಷವುಳ್ಳ ವಿದ್ಯಾರ್ಥಿಗಳಿಗೆ ಭಾಷಾ ಸಮಸ್ಯೆ ಇರುವುದರಿಂದ ಪರೀಕ್ಷೆ ಬರೆಯುವಲ್ಲಿ ವ್ಯಾಕರಣ, ವಾಕ್ಯ ರಚನಾ ದೋಷಗಳು ಆಗುವ ಸಾಧ್ಯತೆ ಇರುವುದನ್ನು ಪರಿಗಣಿಸಿ ಉತ್ತರ ಪತ್ರಿಕೆಯ ಮೌಲ್ಯ ಮಾಪಕರು ಅಂತಹ ವಿದ್ಯಾರ್ಥಿಗಳ ಉತ್ತರ ಪತ್ರಿಕೆಯನ್ನು ಗುರ್ತಿಸಿ, ಔದಾರ್ಯದಿಂದ ಮೌಲ್ಯಮಾಪನ ಮಾಡಲು ಅನುಕೂಲವಾಗುವಂತೆ ಶ್ರವಣ ದೋಷವುಳ್ಳ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳಿಗೆ ಹಸಿರು ಬಣ್ಣದ ಸ್ಟಿಕರ್ ಅಂಟಿಸುವಲ್ಲಿ ಕ್ರಮ ತೆಗೆದುಕೊಳ್ಳುವುದು.

(ಶೋಭಾ ನಂಬೀಶನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಶಿಕ್ಷಣ ಇಲಾಖೆ,

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ ಅದರ ೧೦೦೦ ಪ್ರತಿಗಳನ್ನು ಒದಗಿಸುವಂತೆ ಕೋರಲಾಗಿದೆ.

೧. ಕಾಲೇಜು ಶಿಕ್ಷಣ ಆಯುಕ್ತರು, ಬೆಂಗಳೂರು-೧
೨. ಎಲ್ಲ ವಿಶ್ವವಿದ್ಯಾಲಯಗಳ ಕುಲಸಚಿವರು (ಮೌಲ್ಯಮಾಪನ)ರವರಿಗೆ
೩. ಆಯುಕ್ತರು, ಅಂಗವಿಕಲರ ಅಧಿನಿಯಮ ಕಚೇರಿ, ನಂ.೪೦, ತಂಬುಚೆಟ್ಟಿ ರಸ್ತೆ, ಕಾಕ್ಸ್‌ಟೌನ್, ಬೆಂಗಳೂರು-೫೬೦ ೦೦೫
೪. ಕಾರ್ಯದರ್ಶಿಗಳು, ತಾಂತ್ರಿಕ ಶಿಕ್ಷಣ ಮಂಡಳಿ, ಅರಮನೆ ರಸ್ತೆ, ಬೆಂಗಳೂರು-೧.
೫. ಉಪಕಾರ್ಯದರ್ಶಿ-೪., ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ)
೬. ಅಧೀನ ಕಾರ್ಯದರ್ಶಿ, ತಾಂತ್ರಿಕ ಶಿಕ್ಷಣ
೭. ಶಾಖಾಧಿಕಾರಿಗಳು, ವಿಶ್ವವಿದ್ಯಾಲಯ-೧, ವಿಶ್ವವಿದ್ಯಾಲಯ-೨. ತಾಂತ್ರಿಕ ಶಿಕ್ಷಣ, ಕಾಲೇಜು ಶಿಕ್ಷಣ

ಪ್ರತಿ:-
ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ,
ಸಹ ಕಾರ್ಯದರ್ಶಿಗಳ ಆಪ್ತಸಹಾಯಕ, ಶಿಕ್ಷಣ ಇಲಾಖೆ

ಪತ್ರಿಕಾ ವೇದಿಕೆ.